**ಅಸಲು ದಾವಾ ಸಂಖ್ಯೆ - 48/2021**
**ಪಿಡಬ್ಲೂ - 1**

**ದಿನಾಂಕ 27-08-2021 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋಧಿಸಲಾಯಿತು**

**ಮುಖ್ಯ ವಿಚಾರಣೆಃ ವಾದಿ ಪರ ವಕೀಲರಾದ ಶ್ರೀ ಎಸ್. ಎಸ್. ಆಲೂರರವರಿಂದ.**

ಮುಖ್ಯ ವಿಚಾರಣೆಯ ಪ್ರಮಾಣ ಪತ್ರದಲ್ಲಿ ಬರೆದಿರುವ ಎಲ್ಲಾ ಅಂಶಗಳು ಸತ್ಯವಾಗಿರುತ್ತವೆ. ಮುಖ್ಯ ವಿಚಾರಣೆಯ ಪ್ರಮಾಣ ಪತ್ರವನ್ನು ತಯಾರಿಸಲು ವಕೀಲರಿಗೆ ಮಾಹಿತಿಯನ್ನು ನಾನೇ ನೀಡಿರುತ್ತೇನೆ. ಸದರಿ ಪ್ರಮಾಣ ಪತ್ರದಲ್ಲಿ ಬರೆದಿರುವ ಅಂಶಗಳನ್ನು ವಕೀಲರು ನನಗೆ ಗೊತ್ತಿರುವ ಭಾಷೆಯಲ್ಲಿ ಓದಿ ಹೇಳಿರುತ್ತಾರೆ.

ದಿನಾಂಕ 25-07-2017 ರ ಮೂಲ ಕ್ರಯ ಪತ್ರವನ್ನು ಹಾಜರು ಪಡಿಸಿರುತ್ತೇನೆ. ಸದರಿ ದಾಖಲೆಯನ್ನು ನಿಪಿ-1 ಎಂದು ಗುರುತಿಸಲಾಯಿತು. ಒಂದು ಪಹಣಿಯನ್ನು ಹಾಜರು ಪಡಿಸಿರುತ್ತೇನೆ. ಸದರಿ ದಾಖಲೆಯನ್ನು ನಿಪಿ-2 ಎಂದು ಗುರುತಿಸಲಾಯಿತು. ಮ್ಯೂಟೇಶನ ಎಮ್ ಆರ್ ಸಂಖ್ಯೆ ಹೆಚ್-10/2018-2019 ನ್ನು ಹಾಜರು ಪಡಿಸಿರುತ್ತೇನೆ. ಸದರಿ ದಾಖಲೆಯನ್ನು ನಿಪಿ-3 ಎಂದು ಗುರುತಿಸಲಾಯಿತು. ಆದ್ದರಿಂದ ದಾವೆಯನ್ನು ಡಿಕ್ರಿ ಮಾಡಬೇಕೆಂದು ಕೇಳಿಕೊಳ್ಳುತ್ತೇನೆ.

**ಪಾಟೀ ಸವಾಲುಃ ಪ್ರತಿವಾದಿ ಪರ ವಕೀಲರ ಕೋರಿಕೆ ಪರ ಪಾಟೀ ಸವಾಲು ಮುಂದೂಡಲಾಯಿತು.**

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)**

**ಓ.ಹೇ.ಕೆ.ಸರಿ.ಇದೆ.**

ದಿವಾನಿ ನ್ಯಾಯಾಧೀಶರು
ಜೇವರ್ಗಿ